ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080–22028032/34/ಫ್ಯಾಕ್ಸ್ 22028041

ದಿನಾಂಕ : 23–02–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳ ಒಂದು ದಿನದ ಕಾರ್ಯಾಗಾರ .<br>ಉದ್ಘಾಟನೆ:<br>ಶ್ರೀ ಟಿ.ಬಿ. ಜಯಚಂದ್ರ,<br>ಪಶುಸಂಗೋಪನೆ ಮತ್ತು ಕಾನೂನು ಸಚಿವರು. | 24–02–2015<br>ಮಂಗಳವಾರ<br>ಬೆಳಗ್ಗೆ<br>11–00 ಗಂಟೆಗೆ | ಕರ್ನಾಟಕ ಪಶು ವೈದ್ಯಕೀಯ ಪರಿಷತ್ ಸಭಾಂಗಣ, ಪಶು ವೈದ್ಯಕೀಯ ಕಾಲೇಜು ಆವರಣ, ಹೆಬ್ಬಾಳ. ಬೆಂಗಳೂರು. |
| 2. | ಪತ್ರಿಕಾಗೋಷ್ಠಿ:<br>ಶ್ರೀ ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ | 24–02–2015<br>ಮಂಗಳವಾರ<br>ಮಧ್ಯಾಹ್ನ<br>1–00 ಗಂಟೆಗೆ | ಕೊಠಡಿ ಸಂಖ್ಯೆ 419,<br>ನಾಲ್ಕನೇ ಮಹಡಿ,<br>ವಿಕಾಸಸೌಧ,<br>ಬೆಂಗಳೂರು. |
| 3 | ಪತ್ರಿಕಾಗೋಷ್ಠಿ:<br>ಶ್ರೀ ಪಿ. ಆರ್. ರಮೇಶ್,<br>ಅಧ್ಯಕ್ಷರು,<br>ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ | 24–02–2015<br>ಮಂಗಳವಾರ<br>ಸಂಜೆ<br>4–00 ಗಂಟೆಗೆ | ಸಭಾಂಗಣ,<br>ಮೂರನೇ ಮಹಡಿ,<br>ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಶೇಷಾದ್ರಿಪುರಂ<br>ಬೆಂಗಳೂರು– 560 020 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ತೋಟಗಾರಿಕಾ ತರಬೇತಿ

ಬೆಂಗಳೂರು, ಫೆಬ್ರವರಿ 23 (ಕರ್ನಾಟಕ ವಾರ್ತೆ)

ತೋಟಗಾರಿಕೆಯಲ್ಲಿ ಒಂದು ತಿಂಗಳ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮದ ತರಬೇತಿಯನ್ನು ದಿನಾಂಕ 02-03-2015 ರಿಂದ 31-03-2015 ರವರೆಗೆ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ಇಲ್ಲಿ ರೈತ ಮಕ್ಕಳಿಗೆ ಹಮ್ಮಿಕೊಂಡಿದ್ದು, ಬೆಂಗಳೂರು ಗ್ರಾಮಾಂತರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ, ದಕ್ಷಿಣ ಕನ್ನಡ, ಕೊಡಗು, ಮಂಡ್ಯ, ಹಾಸನ, ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಗಳಲ್ಲಿನ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ದಿನಾಂಕ 23-02-2015 ರಿಂದ ಮೇಲೆ ತಿಳಿಸಿದ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ದಿನಾಂಕ 27-02-2015 ಸಂಜೆ 5-30 ಗಂಟೆಯೊಳಗೆ ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ದಿನಾಂಕ 28-02-2015 ರಂದು ಅಭ್ಯರ್ಥಿಗಳನ್ನು ಸಂದರ್ಶನದ ಮುಖಾಂತರ ಆಯ್ಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿ ಅಥವಾ ಸಹಾಯಕ ತೋಟಗಾರಿಕೆ ನಿರ್ದೇಶಕರು, ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ಇಲ್ಲಿ ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ 080 – 26564538.

ಬಾಬು:ಜಿಪಿಆರ್.

# ವಿದೇಶಿ ವ್ಯಾಸಂಗಕ್ಕೆ ಬಡ್ಡಿ ರಹಿತ ಸಾಲ

**ಬೆಂಗಳೂರು, ಫೆಬ್ರವರಿ 23 (ಕರ್ನಾಟಕ ವಾರ್ತೆ)**

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವು ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳು ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಹೊಂದಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಾರ್ಷಿಕ ಗರಿಷ್ಠ ರೂ 3.50 ಲಕ್ಷಗಳಂತೆ 3 ವರ್ಷದ ಅವಧಿಗೆ ಗರಿಷ್ಠ ರೂ 10.00 ಲಕ್ಷಗಳ ಬಡ್ಡಿ ರಹಿತ ಸಾಲ ಮಂಜೂರು ಮಾಡಲಾಗುವುದು.

ಅಭ್ಯರ್ಥಿಯು ಗರಿಷ್ಠ 35 ವರ್ಷಗಳ ವಯೋಮಿತಿಯಲ್ಲಿರಬೇಕು. ಅಭ್ಯರ್ಥಿಯ ಕುಟುಂಬದ ವಾರ್ಷಿಕ ವರಮಾನ ರೂ 1.44 ಲಕ್ಷಗಳನ್ನು ಮೀರಿರಬಾರದು. ಅರ್ಹತಾ ಪರೀಕ್ಷೆಯಲ್ಲಿ ಶೇ 60 ಕ್ಕಿಂತ ಹೆಚ್ಚಿನ ಅಂಕ ಗಳಿಸಿರಬೇಕು. ಈ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಯನ್ನು ಹಾಗೂ ಅರ್ಜಿ ನಮೂನೆಯನ್ನು ವೆಬ್‌ಸೈಟ್ www.karnataka.gov.in /dbcdc ನಲ್ಲಿ ಪಡೆಯಬಹುದಾಗಿದೆ.

ಬಾಬು:ಜಿಪಿಆರ್

# ಬ್ಯಾಕ್‌ಲಾಗ್ ಹುದ್ದೆಗಳಿಗೆ ನೇಮಕಾತಿ

**ಬೆಂಗಳೂರು, ಫೆಬ್ರವರಿ 23 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 21-02-2015 ರಂದು ಸರ್ಕಾರದ ವಿವಿಧ ಇಲಾಖೆಗಳಲ್ಲಿ ವಿವಿಧ ಗ್ರೂಪ್ – 'ಎ' 'ಬಿ' ಮತ್ತು 'ಸಿ' ತಾಂತ್ರಿಕ/ತಾಂತ್ರಿಕೇತರ/ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಿದ್ದು, ದಿನಾಂಕ 21-02-2015 ರಿಂದ ಅಭ್ಯಥಿಗಳನ್ನು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಅಧಿಸೂಚನೆಯನ್ನು ಆಯೋಗದ ಅಂತರ್ಜಾಲ

**“http://kpsc.kar.nic.in/Notification” ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ**

ಬಾಬು:ಜಿಪಿಆರ್

## ನಿರ್ದೇಶರಾಗಿ ಐ.ಎಂ. ಕಂಬಳಿ

**ಬೆಂಗಳೂರು, ಫೆಬ್ರವರಿ 23 (ಕರ್ನಾಟಕ ವಾರ್ತೆ)**

**ರಾಜ್ಯ ಭಾಷಾಂತರ ಇಲಾಖೆ ನಿರ್ದೇಶಕರಾಗಿ ಶ್ರೀ ಐ.ಎಂ. ಕಂಬಳಿ ಅವರನ್ನು ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.**

**ಬಾಬು/ಕೆಎಂ.**